ಆ) ರೂ. 41.00 ಕೋಟಿ.

ಇ) ಅಂದಾಜು ಪಟ್ಟಿಯಲ್ಲಿ ರೂ. 1.00 ಕೋಟಿ ಒದಗಿಸಲಾಗಿದೆ.

ಅ) ಬಿಡುಗಡೆ ಮಾಡಿದ್ದು ರೂ. 0.75 ಕೋಟಿ.

ಆ) ಹೆಚ್ಚುವರಿ ಅನುದಾನ ರೂ. 4.00 ಕೋಟಿ.

ಒಟ್ಟು ರೂ. 4.75 ಕೋಟಿ.

ಈ) ಜೂನ್ 1998ರ ಕೊನೆಗೆ ಪೂರ್ಣಗೊಳ್ಳುವ ನಿರೀಕ್ಷೆ ಇದೆ.

ಉ) ಕೇಂದ್ರ ಸರ್ಕಾರದಿಂದ ಯಾವುದೇ ಹಣ ಬಂದಿರುವುದಿಲ್ಲ.

ಊ) ಡಿಸೆಂಬರ್ 1998ರೊಂದಿಗೆ ಎಲ್ಲಾ ಕಾರ್ಯಗಳು ಪೂರ್ಣಗೊಳ್ಳುವಂತೆ ಕ್ರಮ ಕೈಗೊಳ್ಳಲಾಗುವುದು.

ರಾಜ್ಯದಲ್ಲಿರುವ ಸಂಚಾರಿ ಗ್ರಂಥಾಲಯಗಳ ಸಂಖ್ಯೆ

68 (74)

ಶ್ರೀ ರಾಮಲಿಂಗಾರೆಡ್ಡಿ (ಜಯನಗರ): ಮಾನ್ಯ ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಒಟ್ಟು ಸಂಚಾರಿ ಗ್ರಂಥಾಲಯಗಳೆಷ್ಟು?

ಆ) 1997-98ನೇ ಸಾಲಿನಲ್ಲಿ ಹೊಸದಾಗಿ ಎಷ್ಟು ಸಂಚಾರಿ ಗ್ರಂಥಾಲಯಗಳನ್ನು ಆರಂಭಿಸಲಾಗಿದೆ?

ಇ) ಈ ಸಂಚಾರಿ ಗ್ರಂಥಾಲಯಗಳು ಯಾವ ಯಾವ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿವೆ?

ಈ) 1998-99ರಲ್ಲಿ ಹೊಸದಾಗಿ ಸಂಚಾರಿ ಗ್ರಂಥಾಲಯಗಳನ್ನು ಯಾವ ಯಾವ ಜಿಲ್ಲೆಗಳಲ್ಲಿ ಆರಂಭಿಸಲಾಗುವುದು?

ಶ್ರೀ ಆರ್.ಕೃಷ್ಣಪ್ಪ (ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು):

ಅ) 14

ಆ) 03

ಇ) ನಗರ ಕೇಂದ್ರ ಗ್ರಂಥಾಲಯ, ಬೆಂಗಳೂರು ದಕ್ಷಿಣ ವಲಯ, ಬೆಂಗಳೂರು ಪಶ್ಚಿಮ ವಲಯ, ಜಿಲ್ಲಾ ಕೇಂದ್ರ ಗ್ರಂಥಾಲಯ (ನಗರ) ಬೆಂಗಳೂರು. ನಗರ ಕೇಂದ್ರ ಗ್ರಂಥಾಲಯ, ಶಿವಮೊಗ್ಗ, ಮೈಸೂರು, ಬೆಳಗಾಂ, ಬಿಜಾಪುರ, ಗುಲ್ಬರ್ಗ, ಧಾರವಾಡ, ದಾವಣಗೆರೆ, ಮಂಗಳೂರು, ಕಾರವಾರ, ಮಡಿಕೇರಿ, ಚಿಕ್ಕಮಗಳೂರು.

ಈ) ಜಿಲ್ಲಾ ಕೇಂದ್ರ ಗ್ರಂಥಾಲಯ, ಬಳ್ಳಾರಿ ಹಾಗೂ ತುಮಕೂರು.

ಪಲ್ಸ್ ಪೋಲಿಯೋ ಕಾರ್ಯಕ್ರಮ

69 (75)

ಶ್ರೀ ರಾಮಲಿಂಗಾ ರೆಡ್ಡಿ (ಜಯನಗರ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕಾಗಿ ಕೇಂದ್ರ ಸರ್ಕಾರದವರು ಬಿಡುಗಡೆ ಮಾಡಿದ ಹಣವೆಷ್ಟು?

ಆ) ಈ ಹಣದಲ್ಲಿ ಎಷ್ಟು ಹಣವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಿದೆ?

ಇ) ಉಳಿದ ಹಣದಲ್ಲಿ ಪ್ರಚಾರ ಸಾಮಗ್ರಿಗಳ ಮುದ್ರಣಕ್ಕಾಗಿ ಖರ್ಚು ಮಾಡಿದ ಹಣವೆಷ್ಟು?

ಈ) ಈ ಮುದ್ರಣ ಕೆಲಸವನ್ನು ಖಾಸಗಿ ಮುದ್ರಣಾಲಯಕ್ಕೆ ನೀಡಲಾಗಿತ್ತೇ?

ಉ) ಪಲ್ಸ್ ಪೋಲಿಯೋ ಕಾರ್ಯಕ್ರಮದ ಹಣ ದುರುಪಯೋಗ ವಾಗಿರುವುದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಒಟ್ಟು ರೂ: 133.30 ಲಕ್ಷ (ರೂ: 80.00 ಲಕ್ಷ ಹಣವನ್ನು ಮಾಹಿತಿ ಶಿಕ್ಷಣ ಸಂಪರ್ಕ ಚಟುವಟಿಕೆಗಳಿಗೆ ಮತ್ತು ರೂ: 53.30 ಲಕ್ಷ ಹಣವನ್ನು ಇಂಧನ ಮತ್ತು ಸಾರಿಗೆ ವೆಚ್ಚಕ್ಕೆ) ಹಣವನ್ನು ಬಿಡುಗಡೆ ಮಾಡಿದೆ.

ಆ) ರೂ: 40.00 ಲಕ್ಷ ಹಣವನ್ನು ರಾಜ್ಯದ 20 ಜಿಲ್ಲಾ ಪಂಚಾಯತ್‌ಗಳಿಗೆ ಮಾಹಿತಿ ಶಿಕ್ಷಣ ಸಂಪರ್ಕ ಚಟುವಟಿಕೆಗಳಿಗೆ ಹಾಗೂ ರೂ: 52.50 ಲಕ್ಷ ಹಣವನ್ನು 20 ಜಿಲ್ಲಾ ಪಂಚಾಯತ್‌ಗಳಿಗೆ ಮತ್ತು ಬೆಂಗಳೂರು ಮಹಾನಗರ ಪಾಲಿಕೆಗೆ ಇಂಧನ ಮತ್ತು ಸಾರಿಗೆ ವೆಚ್ಚಕ್ಕೆ ಬಿಡುಗಡೆ ಮಾಡಿದೆ.